



ಅರುಣ ಪಿ. ಭಟ್ಟ

## ವಾರಭವಿಷ್ಯ: 17.10.2024ರಿಂದ 23.10.2024ರವರೆಗೆ




ವಿವೇಚನೆಯಿಂದ ಕಾರ್ಯಗಳಲ್ಲಿ ಪಾಲ್ಗೊಳ್ಳಿ. ಕೆಲವರ ಮಾತನ್ನು ನಂಬಿ ನಷ್ಟದ ವ್ಯವಹಾರದಲ್ಲಿ ಪಾಲ್ಗೊಳ್ಳುವ ಸಾಧ್ಯತೆ ಇದೆ. ಸಹೋದರರ ವಿಶ್ವಾಸಗಳನ್ನು ಪಡೆಯಲು ಪ್ರಯತ್ನಿಸುವುದು ಸೂಕ್ತ. ಬಹುಕಾಲದ ವ್ಯಾಜ್ಯಗಳಿಗೆ ಪರಿಹಾರಗಳು ದೊರಕಲಿವೆ. ಆದಾಯ ಹೆಚ್ಚುವ ಅವಕಾಶ ವಿಪುಲವಾಗಿದೆ. ಕಾರ್ಯ ನಿರ್ವಹಿಸುವವರಿಗೆ ಪ್ರಗತಿಗೆ ಅತ್ಯುತ್ತಮ ಅವಕಾಶಗಳಿವೆ. ಶುಭದಿನ 18. ವಿಷ್ಣು ಸಹಸ್ರನಾಮ ಪಠಿಸಿರಿ.




ಹಣಕಾಸು ವ್ಯವಹಾರಗಳು ಯೋಜಿತವಾಗಿ ನಡೆಯಲಿದೆ. ಕಷ್ಟದ ಕಾರ್ಯಗಳನ್ನು ಅನಾಯಾಸವಾಗಿ ಮಾಡಿ ಮುಗಿಸಲಿದ್ದೀರಿ. ಕುಟುಂಬದಲ್ಲಿ ಶುಭಸುದ್ದಿ ಬರಲಿದೆ. ಪ್ರೀತಿಪಾತ್ರರಿಗೆ ಉಡುಗೊರೆ ನೀಡುವ ಸಾಧ್ಯತೆ ಇದೆ. ವೈಯಕ್ತಿಕ ಜೀವನದಲ್ಲಿ ಸಣ್ಣಪುಟ್ಟ ವಿಷಯಗಳಿಗೂ ಭಿನ್ನಾಭಿಪ್ರಾಯ ತಲೆದೋರಲಿದೆ. ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಪ್ರಗತಿಗೆ ಹಲವು ಅಡ್ಡಿ ಆತಂಕ ಎದುರಾಗಲಿದೆ. ಶುಭದಿನ 19. ಹನುಮಾನ್ ಚಾಲೀಸ್ ಪಠಿಸಿರಿ.




ಆತ್ಮೀಯರ ಜೊತೆ ವಿವಾದಗಳು ಹೆಚ್ಚಾಗಬಹುದು. ಭೂಮಿಗೆ ಸಂಬಂಧಪಟ್ಟಂತಹ ವ್ಯಾಜ್ಯಗಳಿಂದ ನಿಮ್ಮ ಮನಸ್ಥಿತಿ ಹಾಳಾಗಬಹುದು. ಒತ್ತಡಭರಿತ ವಿಚಾರಗಳಿಂದ ಖಿನ್ನತೆ ಆವರಿಸಲಿದೆ ಆದಷ್ಟು ದೈಹಿಕ–ಮಾನಸಿಕ ಚೈತನ್ಯಕ್ಕೆ ಆದ್ಯತೆ ಕೊಡಿ. ಅವಕಾಶವಾಗಿ ಬಳಸಿಕೊಳ್ಳುವುದರಲ್ಲಿ ಬಿಡುವಿಲ್ಲದಂತೆ ಆಗುತ್ತದೆ. ಒಗ್ಗಟ್ಟಾಗಿ ಕೆಲಸ ಮಾಡಲು ಪ್ರೇರಣೆ ಸಿಗುತ್ತದೆ. ಶುಭದಿನ 22. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಯೋಜಿತ ಕಾರ್ಯಗಳಲ್ಲಿ ವ್ಯವಸ್ಥಿತವಾದ ಕಾರ್ಯಶೈಲಿ ಕಂಡುಬರುತ್ತದೆ. ಧನಾಗಮನ ಸರಾಗವಾಗಿ ನಡೆಯಲಿದೆ. ಲೇವಾದೇವಿ ವ್ಯವಹಾರದ ಬಗ್ಗೆ ಎಚ್ಚರ. ಕುಟುಂಬದ ಜೊತೆಗೆ ಹೆಚ್ಚಿನ ಕಾಲ ಕಳೆಯಲಿದ್ದೀರಿ. ಆತ್ಮೀಯರೊಡನೆ ಮನಸ್ತಾಪ ಆಗದಂತೆ ನೋಡಿಕೊಳ್ಳುವುದು ಒಳ್ಳೆಯದು. ನಿಮ್ಮ ಉತ್ಸಾಹ ಸಂತಸವಾದ ವಾತಾವರಣವನ್ನು ಸೃಷ್ಟಿ ಮಾಡುತ್ತದೆ. ಶುಭದಿನ 20. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ಜನಪ್ರಿಯತೆ ಹೆಚ್ಚಾದಂತೆ ವಿರೋಧಿಗಳು ಹೆಚ್ಚಾಗಲಿದ್ದಾರೆ. ನಿಮ್ಮ ಪ್ರತಿ ಕಾರ್ಯಗಳಿಗೂ ತೊಂದರೆ ನೀಡುವ ವ್ಯಕ್ತಿಗಳನ್ನು ಗುರುತಿಸಿ ಆದಷ್ಟು ದೂರವಿಡುವುದು ಒಳ್ಳೆಯದು. ವೈಯಕ್ತಿಕ ವಿಚಾರಗಳನ್ನು ಯಾರೊಂದಿಗೂ ಹಂಚಿಕೊಳ್ಳಬೇಡಿ. ಕ್ಷುಲ್ಲಕ ವಿಚಾರಗಳಿಗೆ ಗಮನ ಹರಿಸಬೇಡಿ. ಪತ್ನಿಯ ವಿಚಾರಗಳಿಗೆ ಸಹಮತನೀಡಿ. ಸಂತೃಪ್ತಿಯ ಭಾವನೆ ಮೂಡಲಿದೆ. ಶುಭದಿನ 19. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ಬಹುಮುಖ್ಯ ಕೆಲಸವನ್ನು ನೀವು ಮರೆತುಬಿಡಬಹುದು. ಆರೋಗ್ಯದ ಹಿತದೃಷ್ಟಿ ಬಗ್ಗೆ ಯೋಚನೆ ಇರಲಿ. ಹೆಚ್ಚಿನ ಕೆಲಸ ಹಾಗೂ ಹೊಸ ಆದಾಯ ಮಾರ್ಗ ಕಂಡುಬರಲಿದೆ. ಆದಾಯ ಹೆಚ್ಚಳವಾಗಿದ್ದರೂ ಖರ್ಚು ವಿಪರೀತವಾಗಲಿದೆ. ಪತ್ನಿಯೊಡನೆ ಉತ್ತಮ ಬಾಂಧವ್ಯ ಇರಲಿದೆ. ಮುನಿಸಿಕೊಂಡು ಹೋಗಿರುವ ದಂಪತಿಗಳು ಹತ್ತಿರವಾಗುವ ಸಮಯವಿದು. ಶುಭದಿನ 21. ಆದಿತ್ಯ ಹೃದಯ ಪಠಿಸಿರಿ.




ವ್ಯವಹಾರದ ನಿಮಿತ್ತ ತಿರುಗಾಟ ಹೆಚ್ಚಾಗಬಹುದು. ಆರ್ಥಿಕವಾಗಿ ಬಳಲುವಿಕೆ ಈ ವಾರ ಕಂಡುಬರಲಿದೆ. ಸಾಲದ ಬಾಧೆ ನಿಮ್ಮ ಸಮಸ್ಯೆಗಳಿಗೆ ಮತ್ತಷ್ಟು ಸಂಕಷ್ಟ ತಂದೊಡ್ಡಲಿದೆ. ಕಟ್ಟಡ ಕಾಮಗಾರಿಗಳಲ್ಲಿ ಹಣಕಾಸಿನ ಕುಂದುಕೊರತೆ ಕಾಡಲಿದೆ. ಭೂ ವ್ಯಾಜ್ಯವೊಂದಕ್ಕೆ ಶ್ರಮ ಹಾಕಲಿದ್ದೀರಿ. ಕಾನೂನು ವಿಚಾರಗಳಲ್ಲಿ ತೊಡಗಿಕೊಳ್ಳಬೇಕಾದ ಅಗತ್ಯ ಕಂಡುಬರುತ್ತದೆ. ಶುಭದಿನ 19. ಚಂಡಿ ಪಾರಾಯಣ ಮಾಡಿರಿ.




ವಾರದ ಆರಂಭದಿಂದಲೇ ನಿಮ್ಮ ಕೆಲಸಗಳಿಗೆ ವೇಗ ನೀಡುತ್ತೀರಿ. ನಿಮ್ಮ ಕೆಲಸ ಇನ್ನಷ್ಟು ಪರಿಣಾಮಕಾರಿಯಾಗಿ ಮಾಡಲು ಸಾಧ್ಯವಾಗುತ್ತದೆ. ವೈವಾಹಿಕ ಜೀವನವು ಸಂತಸದಾಯಕವಾಗಿರುತ್ತದೆ. ಚರ್ಚಾಕೂಟಗಳಲ್ಲಿ ಪಾಲ್ಗೊಳ್ಳಲಿದ್ದೀರಿ. ನಿರೀಕ್ಷೆಯಂತೆ ಆರ್ಥಿಕವಾಗಿ ಪ್ರಬಲರಾಗುವ ಸಾಧ್ಯತೆ ಕಂಡುಬರುತ್ತದೆ. ವಿದ್ಯಾರ್ಥಿಗಳಿಗೆ ಉತ್ತಮ ನಿರೀಕ್ಷೆಗಳು ಮೂಡಲಿದೆ. ಶುಭದಿನ 23. ಶ್ರೀ ಲಕ್ಷ್ಮೀ ನರಸಿಂಹ ಪಂಚರತ್ನ ಓದಿರಿ.




ಮಾನಸಿಕ ಕ್ಲೇಶಗಳು ನಿಮ್ಮ ಅಭಿವೃದ್ಧಿಗೆ ಮಾರಕವಾಗಬಹುದು. ಕುಟುಂಬದಲ್ಲಿ ಅಶಾಂತಿಯ ವಾತಾವರಣ ಗೋಚರವಾಗಲಿದೆ. ನಿಮ್ಮ ಕಾರ್ಯಗಳಲ್ಲಿ ಕೆಲವರ ಹಸ್ತಕ್ಷೇಪ ಕಂಡುಬರುತ್ತದೆ. ವ್ಯಾವಹಾರಿಕ ಕ್ಷೇತ್ರದಲ್ಲಿ ಹಿನ್ನಡೆ ಆಗಬಹುದಾದ ಸಾಧ್ಯತೆ ಉಂಟು. ಆರೋಗ್ಯದಲ್ಲಿ ವ್ಯತ್ಯಾಸ ಕಾಣಬಹುದು. ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುವ ಸಾಧ್ಯತೆಗಳಿವೆ. ಶುಭದಿನ 19. ಕಾಲಭೈರವನ ಸೇವೆ ಮಾಡಿರಿ.




ಉದ್ಯೋಗದಲ್ಲಿ ಉತ್ತಮ ಸ್ಥಾನಮಾನ ಸಿಗಲಿದೆ. ಸಹವರ್ತಿಗಳು ನಿಮ್ಮ ಯೋಜನೆಗಳಿಗೆ ಬೆಂಬಲ ನೀಡಲಿದ್ದಾರೆ. ಅದೃಷ್ಟ ಒದಗಿಬರಲಿದೆ. ಕೋರ್ಟ್ ವ್ಯವಹಾರಗಳು ನಿಮ್ಮ ಪರ ಆಗುವ ಸಾಧ್ಯತೆ ಇದೆ. ಸಂಗಾತಿ ಜೊತೆಗೆ ಬಾಂಧವ್ಯ ಗಟ್ಟಿಯಾಗಲಿದೆ. ಉದ್ಯೋಗ ಸ್ಥಳದಲ್ಲಿ ನಿರೀಕ್ಷಿತ ಯಶಸ್ಸು ಸಾಧಿಸಲಿದ್ದೀರಿ. ಸ್ಪರ್ಧಾತ್ಮಕ ಪರೀಕ್ಷೆಗಳ ಫಲಿತಾಂಶ ನಿಮ್ಮ ಪರವಾಗಿ ಇರಲಿದೆ. ಶುಭದಿನ 23. ಸೌಂದರ್ಯ ಲಹರಿ ಪಠಿಸಿರಿ.




ಅಪರಿಚಿತ ವ್ಯಕ್ತಿಗಳಿಂದ ನಷ್ಟವಾಗಬಹುದು. ನಂಬಿಕೆ ದ್ರೋಹದ ಬಗ್ಗೆ ಎಚ್ಚರದಿಂದಿರಿ. ಪತ್ನಿಯೊಡನೆ ಕೋಪ ಕಲಹಗಳಲ್ಲಿ ಪಾಲ್ಗೊಳ್ಳಬೇಡಿ. ನಿಮ್ಮೆಲ್ಲಾ ಕೆಲಸಗಳಿಗೆ ತಾಳ್ಮೆ ಅತ್ಯವಶ್ಯಕ. ಹಣಕಾಸಿನ ವಿಷಯದಲ್ಲಿ ಉತ್ತಮ ರೀತಿಯ ವ್ಯವಹಾರ ಕಾಣಬಹುದು. ಹಣಕಾಸಿನ ವೆಚ್ಚ ಹೆಚ್ಚಾಗಲಿದೆ. ವೃತ್ತಿಗೆ ಸಂಬಂಧಿಸಿದಂತೆ ಯಾವುದೇ ವಿಚಾರದಲ್ಲಿ ನಿರ್ಲಕ್ಷ್ಯ ಮಾಡಬೇಡಿ. ಶುಭದಿನ 22. ಕನಕಧಾರಾ ಸ್ತೋತ್ರ ಪಠಿಸಿರಿ.




ಕೆಲಸಗಳಲ್ಲಿ ನಿಮ್ಮ ಪಾಲ್ಗೊಳ್ಳುವಿಕೆ ಉತ್ತಮವಾಗಲಿದೆ. ಕಲಿಕೆಯ ವಿಷಯಾಸಕ್ತಿ ಉತ್ತಮ ಮಟ್ಟದಲ್ಲಿ ಇರಲಿದೆ. ಆರ್ಥಿಕ ಸ್ಥಿತಿ ಮಧ್ಯಮ ಗತಿಯಲ್ಲಿ ನಡೆಯಲಿದೆ. ಕೆಲಸಗಳಿಗಾಗಿ ಪರಸ್ಥಳ ವಾಸ ಅನುಭವಿಸಬೇಕಾದ ಸಂದರ್ಭ ಒದಗಿ ಬರಬಹುದು. ನೀವು ಮಾಡಿದ ಒಳ್ಳೆಯ ಕೆಲಸಕ್ಕೆ ಮೆಚ್ಚುಗೆ ಲಭಿಸಲಿದೆ. ಕೌಟುಂಬಿಕ ಜೀವನ ಆರಾಮವಾಗಿ ಇರುತ್ತದೆ. ಶುಭದಿನ 21. ಚಂಡಿ ಪಾರಾಯಣ ಮಾಡಿರಿ.